ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

51

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER:

ದಿನಾಂಕ : DATE :

# ಸದನಕ್ಕೆ ಬಾರದ ಸಿಎಂ: ಮೇಲ್ಮನೆ ಸದಸ್ಯರ ದೂರು

ವಿಧಾನಪರಿಷತ್ತು: ಸಿಎಂ ಯಡಿಯೂರಪ್ಪನವರು ನಮ್ಮ ಸದನಕ್ಕೆ ಬರುತ್ತಿಲ್ಲ ಎಂದು ಮೇಲ್ಮನೆಯ ಪ್ರತಿಪಕ್ಷ ಕಾಂಗ್ರೆಸ್-ಜೆಡಿಎಸ್ ಸದಸ್ಯರು ಆಕ್ಷೇಪ ವ್ಯಕ್ತಪಡಿಸಿದ ಪ್ರಸಂಗ ಗುರುವಾರ ನಡೆಯಿತು. ಪ್ರಶ್ನೋತ್ತರ ವೇಳೆಯಲ್ಲಿ ಮುಖ್ಯಮಂತ್ರಿಯವರ ಬಳಿ ಇರುವ ಹಣಕಾಸು, ಇಂಧನ, ಬೆಂಗಳೂರು ಅಭಿವೃದ್ಧಿ ಇಲಾಖೆಗಳಿಗೆ ಸಂಬಂಧಿಸಿದ ಪ್ರಶ್ನೆಗಳಿದ್ದವು. ಅದಕ್ಕೆ ಸಭಾನಾಯಕ ಕೋಟ ಶ್ರೀನಿವಾಸ ಪೂಜಾರಿ ಉತ್ತರ ನೀಡುತ್ತಿದ್ದರು. ಆಗ ಎಸ್.ಆರ್. ಪಾಟೀಲ, ಶ್ರೀಕಂಠೇಗೌಡ ಸೇರಿ ಕಾಂಗ್ರೆಸ್-ಜೆಡಿಎಸ್ ಸದಸ್ಯರು ಆಕ್ಷೇಪ ವ್ಯಕ್ತಪಡಿಸಿದರು. ಕಳೆದ ಅಧಿವೇಶನದಲ್ಲೂ ಮುಖ್ಯಮಂತ್ರಿಯವರು ಈ ಸದನಕ್ಕೆ ಬಂದಿಲ್ಲ. ಅನೇಕ ಪ್ರಶ್ನೆಗಳಿಗೆ ಮುಖ್ಯಮಂತ್ರಿಯವರಿಂದಲೇ ಉತ್ತರ ಪಡೆದುಕೊಳ್ಳಬೇಕಾಗುತ್ತದೆ. ಸಭಾನಾಯಕರ ಸಾಮರ್ಥ್ಯವನ್ನು ನಾವು ಪ್ರಶ್ನೆ ಮಾಡುತ್ತಿಲ್ಲ. ಕೆಲವೊಂದು ನೀತಿ ನಿರ್ಣಯ ವಿಚಾರಗಳಿಗೆ ಮುಖ್ಯಮಂತ್ರಿಗಳೇ ಉತ್ತರ ನೀಡಿದರೆ ಸರಿ ಆಗುತ್ತದೆ. ಈ ಬಗ್ಗೆ ಸಭಾಪತಿಯವರೇ ಅವರಿಗೆ ಪತ್ರ ಬರೆದು ನಿರ್ದೇಶನ ನೀಡಬೇಕು ಎಂದರು. ಅದಕ್ಕೆ ಸಭಾಪತಿ ಬಸವರಾಜ ಹೊರಟ್ಟಿ, ಮುಂದಿನ ದಿನಗಳಲ್ಲಿ ಮುಖ್ಯಮಂತ್ರಿಯವರು ಸದನಕ್ಕೆ ಬಂದು ಅವರ ಪ್ರಶ್ನೆಗಳಿಗೆ ಅವರೇ ಉತ್ತರ ನೀಡುವಂತೆ ನೋಡಿಕೊಳ್ಳಿ ಎಂದು ಸಭಾನಾಯಕ ಕೋಟ ಶ್ರೀನಿವಾಸ ಪೂಜಾರಿ ಅವರಿಗೆ ಹೇಳಿದರು.